**ಡಿ ಡಬ್ಲೂಃ 1** **ಅಸಲು ದಾವಾ ಸಂಖ್ಯೆಃ 249/2020**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ರವರ ನ್ಯಾಯಾಲಯ, ಗುಬ್ಬಿ.**

**ದಿನಾಂಕಃ 12.08.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಸತ್ಯ ಪ್ರತಿಜ್ಞೆಯ ಮೇರೆಗೆ**

**ಮುಂದುವರೆದ ಪಾಟೀ ಸವಾಲುಃ ವಾದಿಯ ಪರ ವಕೀಲರಾದ ಶ್ರೀಃ ಟಿ ಎನ್ ಜಿ ರವರಿಂದಃ**

ನಿಡಿ.4 ಮತ್ತು 5 ರಂತೆ ಸರ್ವೆ ಮಾಡುವ ಮೊದಲು ಆಜು ಬಾಜುದಾರರಿಗೆ ನೋಟೀಸ್ ನೀಡಿದ್ದಾರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ನೀವು ಅಳತೆಗೆ ಹಣವನ್ನು ಕಟ್ಟಿದಾಗ ಆಜು ಬಾಜುದಾರರಿಗೆ ನೋಟೀಸ್ ನೀಡಿದ್ದಿರಾ ಎಂದರೆ ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿ ಮುಂದುವರೆದು ಸ.ನಂ.14/5 ಈಗಲೂ ಆಳತೆ ಆಗಿಲ್ಲ ಆದರೆ ಪೋಡಾಗಿರುತ್ತದೆ ಎಂದು ನುಡಿಯುತ್ತಾರೆ. ನಿಮ್ಮ ಮಗಳು ಕಂದಾಯ ಇಲಾಖೆಯಲ್ಲಿ ನೌಕರರಾಗಿದ್ದಾರೆ ಎಂದರೆ ಸರಿ. ಅವರು ಎಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದರೆ ಬೆಂಗಳೂರಿನ ಕಂದಾಯ ಇಲಾಖೆಯಲ್ಲಿ ಕೆಲಸದಲ್ಲಿ ಇದ್ದಾರೆ ಎಂದು ನುಡಿಯುತ್ತಾರೆ. ನೀವು ಅವರ ಕಡೆಯಿಂದ ಪ್ರಭಾವ ಬೀರಿಸಿ ಭೂ ಕಬಳಿಕೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದ್ದೀರಿ ಎಂದರೆ ಸರಿಯಲ್ಲ. ನೀವು ಅವರ ಪ್ರಭಾವವನ್ನು ಬಳಸಿ ತಹಸೀಲ್ದಾರ್ ಮತ್ತು ಜಿಲ್ಲಾಧಿಕಾರಿಗಳು ಮತ್ತು ಕಂದಾಯ ಇಲಾಖೆಯಲ್ಲಿ ತಕರಾರು ಹಾಕಿದ್ದಿರಿ ಎಂದರೆ ಸರಿಯಲ್ಲ. ನಿಮ್ಮ ಮಗಳ ಪ್ರಭಾವ ಬಳಸಿಕೊಂಡು ನಿಡಿ.4 ಮತ್ತು 5 ರ ಸುಳ್ಳು ವರದಿಯನ್ನು ಸೃಷ್ಟಿಸಿದ್ದೀರಿ ಎಂದರೆ ಸರಿಯಲ್ಲ. ನಿಡಿ.4 ಮತ್ತು 5 ರ ದಾಖಲಾತಿಯನ್ನು ಅವರ ಕಚೇರಿಯಲ್ಲಿಯೇ ತಯಾರಿಸಿದ್ದಾರೆ ಎಂದರೆ ಸರಿಯಲ್ಲ ಸಾಕ್ಷಿ ಮುಂದುವರೆದು ಊರಿನಲ್ಲಿ ತಯಾರಿಸಿದ್ದರು ಎಂದು ನುಡಿಯುತ್ತಾರೆ. ದಾವಾ ಅನುಸೂಚಿ ಸ್ವತ್ತಿನ ಖಾತಾ ನಂಬರ್ ನಿಡಿ.4 ಮತ್ತು 5 ರಲ್ಲಿ ನಮೂದಾಗಿಲ್ಲ ಎಂದರೆ ಸರಿಯಲ್ಲ. ಈ ಬಗ್ಗೆ ನೀವು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ವಾದಿಗೆ ತೊಂದರೆ ನೀಡುವ ಉದ್ದೇಶದಿಂದ ನೀವು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಅದು ಸಾರ್ವಜನಿಕ ಆಸ್ತಿ ಎಂದು ನುಡಿಯುತ್ತಾರೆ. ನೀವು ಸಲ್ಲಿಸಿರುವ ಯಾವುದೇ ದಾಖಲಾತಿಯಲ್ಲಿ ದಾವಾ ಅನುಸೂಚಿ ಖಾತಾ ನಂಬರ್

ನಮೂದಾಗಿಲ್ಲ ಎಂದರೆ ಸರಿಯಲ್ಲ. ವಾದಿಯ ಅನುಸೂಚಿ ಸ್ವತ್ತನ್ನು ನೀವು ಕಬಳಿಸುವ ಉದ್ದೇಶದಿಂದ ನೀವು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ಪ್ರಕರಣದಲ್ಲಿ ದಾವಾ ಅನುಸೂಚಿ ಖಾತಾ ನಂಬರ್ ಅನ್ನು ಸೇರಿಸಿದ್ದಿರಾ ಎಂದರೆ ಸೇರಿಸಿದ್ದೇನೆ ಎಂದು ನುಡಿಯುತ್ತಾರೆ. ಆ ರೀತಿ ದಾವಾ ಅನುಸೂಚಿ ಸ್ವತ್ತನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪ್ರಕರಣದಲ್ಲಿ ಸೇರಿಸದೇ ಇದ್ದರೂ ಕೂಡ ನೀವು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ವಾದಿಗೆ ತೊಂದರೆ ನೀಡುವ ಉದ್ದೇಶದಿಂದ ನೀವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯಕ್ಕೆ ಸುಳ್ಳು ರಿಟ್ ಅರ್ಜಿಯನ್ನು ಸಲ್ಲಿಸಿದ್ದೀರಿ ಎಂದರೆ ಸರಿಯಲ್ಲ. ಸಾರ್ವಜನಿಕ ರಸ್ತೆಯನ್ನು ಒತ್ತುವರಿ ಮಾಡಿರುವುದಾಗಿ ನಿಡಿ.4 ಮತ್ತು 5 ರಲ್ಲಿ ನಮೂದಾಗಿಲ್ಲ ಎಂದರೆ ಬರೆದಿದೆ ಎಂದು ನುಡಿಯುತ್ತಾರೆ. ಆ ರೀತಿ ನಮೂದಾಗಿದೇ ಇದ್ದರೂ ಕೂಡ ನೀವು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ಅವರು ಸ್ಥಳಕ್ಕೆ ಅಳತೆಗೆ ಬರದೇ ಇದ್ದರೂ ಕೂಡ ನಿಮ್ಮ ಮಗಳ ಪ್ರಭಾವವನ್ನು ಬೀರಿ ಸುಳ್ಳು ದಾಖಲಾತಿಯನ್ನು ಸೃಷ್ಟಿಸಿದ್ದೀರಿ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ,**
**ಗುಬ್ಬಿ**

**Dw.1 is present. Fully cross examined.**
**Prays time.**
**For further evidence of defendant.**
**Call on.22.08.2026.**